ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/18/ಇಸಿಎಸ್(3)/2020

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001
ದೂ.ಸಂ:080-22200777
E-mail: dte.commissioner@gmail.com

ದಿನಾಂಕ: 08.09.2020.

## ಸುತ್ತೋಲೆ

ವಿಷಯ: ಸೆಪ್ಟೆಂಬರ್ 2020 ರ ಡಿಪ್ಲೊಮಾ ಸೆಮಿಸ್ಟರ್ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳ ಕೊರತೆಯ ಬಗ್ಗೆ.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ, ಸೆಪ್ಟೆಂಬರ್ 2020 ರ ಪ್ರಶ್ನೆಪತ್ರಿಕೆಗಳನ್ನು ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಸಂಸ್ಥೆಗಳ Indent ಅನ್ವಯ ಈಗಾಗಲೇ ಪೂರೈಸಲಾಗಿದೆ.

COVID-19 ರ ಹಿನ್ನೆಲೆಯಲ್ಲಿ ಕೆಲವು ಕೋರ್ಸುಗಳ ಕೆಲವು ಹಳೆಯ ವಿದ್ಯಾರ್ಥಿಗಳು ಕೊನೆಯ ದಿನಗಳಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸಿ ಪರೀಕ್ಷೆಗೆ ಅನುಮತಿ ಪಡೆದಿರುವ ಸಾಧ್ಯತೆ ಇರುವುದರಿಂದ, ಕೆಲವು ಹಳೆಯ ಸ್ಕೀಂ ವಿದ್ಯಾರ್ಥಿಗಳ ಪ್ರಶ್ನೆ ಪತ್ರಿಕೆ ಕೊರತೆ ಕಂಡುಬಂದಲ್ಲಿ, ಅಂತಹ ಸಂಸ್ಥೆಯ ಪ್ರಾಂಶುಪಾಲರು ಸಂಬಂಧಪಟ್ಟ ನೋಡಲ್ ಕೇಂದ್ರದ ಪ್ರಾಂಶುಪಾಲರಿಗೆ ಲಿಖಿತ ಮೂಲಕವಾಗಿ ಕೊರತೆಯನ್ನು ಸಲ್ಲಿಸಿದ ನಂತರ ನೋಡಲ್ ಕೇಂದ್ರದ ವ್ಯಾಪ್ತಿಯ ಎಲ್ಲಾ ಪಾಲಿಟೆಕ್ನಿಕ್‌ಗಳಲ್ಲಿ ಮಾಹಿತಿಯನ್ನು ಕಲೆಹಾಕಿ, ಕನಿಷ್ಠ ಪಕ್ಷ ನಾಲ್ಕು ದಿನಗಳು ಮುಂಚಿತವಾಗಿ ನೋಡಲ್ ಕೇಂದ್ರದ ಪ್ರಾಂಶುಪಾಲರುಗಳು ತಮ್ಮ ವ್ಯಾಪ್ತಿಗೆ ಒಳಪಡುವ ಯಾವುದಾದರು ಸಂಸ್ಥೆಯ ಜವಾಬ್ದಾರಿಯುತ ಅಧಿಕಾರಿಯನ್ನು ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು ಇಲ್ಲಿಗೆ ಖುದ್ದಾಗಿ ಕಳುಹಿಸಿದಲ್ಲಿ ಅಂತಹ ಜವಾಬ್ದಾರಿಯುತ ಅಧಿಕಾರಿಯ ಮೂಲಕ ಕೊರತೆ ಇರುವ ಪ್ರಶ್ನೆ ಪತ್ರಿಕೆಗಳನ್ನು ಕಳುಹಿಸಲಾಗುವುದು.

ಮುಂದುವರೆದು, ಸಂಬಂಧಪಟ್ಟ ಪ್ರಾಂಶುಪಾಲರುಗಳು ಹಾಗೂ ಪ್ರತಿನಿಧಿಯಾಗಿ ಬರುವ ಜವಾಬ್ದಾರಿಯುತ ಅಧಿಕಾರಿ ಎಲ್ಲಾ ಹಂತದಲ್ಲಿ ಪರೀಕ್ಷೆಯ ರಹಸ್ಯ ಮತ್ತು ಪಾವಿತ್ರ್ಯತೆಯನ್ನು ಕಾಯ್ದುಕೊಳ್ಳುವುದು ಹಾಗೂ ಯಾವುದೇ ಹಂತದಲ್ಲಿ ಉಲ್ಲಂಘನೆಯಾದಲ್ಲಿ ಸಂಬಂಧಪಟ್ಟ ಸಂಸ್ಥೆಯವರನ್ನು ಹೊಣೆಗರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

08/09/2020

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಮುಂದಿನ ಅಗತ್ಯ ಕ್ರಮಕ್ಕಾಗಿ
2. ಇ-ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು